**ಮಾಲ್ಡೀವ್ಸ್ ಅಧ್ಯಕ್ಷರನ್ನು ಭೇಟಿ ಮಾಡಿದ ಪ್ರಧಾನಮಂತ್ರಿ (ಜುಲೈ 25, 2025)**

ಜುಲೈ 25, 2025

ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು ಇಂದು ಮಾಲೆಯಲ್ಲಿರುವ ಅಧ್ಯಕ್ಷರ ಕಚೇರಿಯಲ್ಲಿ ಮಾಲ್ಡೀವ್ಸ್ ಗಣರಾಜ್ಯದ ಅಧ್ಯಕ್ಷ ಗೌರವಾನ್ವಿತ ಡಾ. ಮೊಹಮ್ಮದ್ ಮುಯಿಝು ಅವರನ್ನು ಭೇಟಿಯಾದರು. ಸಭೆಗೂ ಮೊದಲು, ಪ್ರಧಾನಮಂತ್ರಿಯವರನ್ನು ಅಧ್ಯಕ್ಷ ಮುಯಿಝು ಅವರು ಬರ ಮಾಡಿಕೊಂಡರು ಮತ್ತು ರಿಪಬ್ಲಿಕ್ ಸ್ಕ್ವೇರ್‌ನಲ್ಲಿ ಔಪಚಾರಿಕ ಸ್ವಾಗತವನ್ನು ನೀಡಲಾಯಿತು. ಈ ಸಭೆಯು ಆತ್ಮೀಯತೆಯಿಂದ ಕೂಡಿತ್ತು ಮತ್ತು ಎರಡೂ ರಾಷ್ಟ್ರಗಳ ನಡುವೆ ಆಳವಾಗಿ ಬೇರೂರಿರುವ ಸ್ನೇಹದ ಮರುದೃಢೀಕರಣವಾಗಿ ಗುರುತಿಸಿಕೊಂಡಿತು.

2. ಪ್ರಧಾನಮಂತ್ರಿಯವರು ತಮಗೆ ಮತ್ತು ತಮ್ಮ ನಿಯೋಗಕ್ಕೆ ನೀಡಿದ ಉದಾರ ಆತಿಥ್ಯಕ್ಕಾಗಿ ಹೃತ್ಪೂರ್ವಕ ಕೃತಜ್ಞತೆಯನ್ನು ವ್ಯಕ್ತಪಡಿಸಿದರು ಮತ್ತು ಮಾಲ್ಡೀವ್ಸ್ ಸ್ವಾತಂತ್ರ್ಯದ ಐತಿಹಾಸಿಕ 60 ನೇ ವಾರ್ಷಿಕೋತ್ಸವ ಮತ್ತು ಎರಡೂ ರಾಷ್ಟ್ರಗಳ ನಡುವಿನ ರಾಜತಾಂತ್ರಿಕ ಸಂಬಂಧಗಳ ಸ್ಥಾಪನೆಯ 60 ನೇ  ವಾರ್ಷಿಕೋತ್ಸವದ ವಿಶೇಷ ಸಂದರ್ಭದಲ್ಲಿ ಶುಭಾಶಯಗಳನ್ನು ವ್ಯಕ್ತಪಡಿಸಿದರು.

3. ಶತಮಾನಗಳಿಂದ ನಿರ್ಮಿಸಲಾದ, ಬಲವಾದ ಜನರಿಂದ ಜನರ ಬಾಂಧವ್ಯದಿಂದ ಬಲಗೊಂಡ ಆಳವಾದ ಸ್ನೇಹ ಮತ್ತು ವಿಶ್ವಾಸದ ಸಂಬಂಧಗಳ ಬಗ್ಗೆ ಉಭಯ ನಾಯಕರು ಚಿಂತನೆ ನಡೆಸಿದರು. 2024 ರ ಅಕ್ಟೋಬರ್‌ನಲ್ಲಿ ಮಾಲ್ಡೀವ್ಸ್ ಅಧ್ಯಕ್ಷರ ರಾಷ್ಟ್ರ ಭೇಟಿಯ ಸಮಯದಲ್ಲಿ ಅಳವಡಿಸಿಕೊಂಡ 'ಸಮಗ್ರ ಆರ್ಥಿಕ ಮತ್ತು ಕಡಲ ಭದ್ರತಾ ಪಾಲುದಾರಿಕೆ' ಗಾಗಿ ಭಾರತ-ಮಾಲ್ಡೀವ್ಸ್ ಜಂಟಿ ದೃಷ್ಟಿಕೋನದ ಅನುಷ್ಠಾನದಲ್ಲಾಗಿರುವ ಪ್ರಗತಿಯನ್ನು ಇಬ್ಬರೂ ನಾಯಕರು ಪರಿಶೀಲಿಸಿದರು. ತನ್ನ "ನೆರೆಹೊರೆ ಮೊದಲು" ಮತ್ತು ವಿಷನ್ ಮಹಾಸಾಗರ್ ನೀತಿಗಳಿಗೆ ಅನುಗುಣವಾಗಿ ಮಾಲ್ಡೀವ್ಸ್‌ನೊಂದಿಗೆ ಸಂಬಂಧಗಳನ್ನು ಮತ್ತಷ್ಟು ಆಳಗೊಳಿಸುವ ಭಾರತದ ಬದ್ಧತೆಯನ್ನು ಪ್ರಧಾನಿ ಪುನರುಚ್ಚರಿಸಿದರು. ಮಾಲ್ಡೀವ್ಸ್‌ಗೆ ಯಾವುದೇ ಬಿಕ್ಕಟ್ಟುಗಳು ಎದುರಾದಾಗ ಮೊದಲ ಪ್ರತಿಕ್ರಿಯೆ ನೀಡುವ ಭಾರತದ ಬದ್ಧತೆಯನ್ನು ಅಧ್ಯಕ್ಷ ಮುಯಿಝು ಶ್ಲಾಘಿಸಿದರು. ಅಭಿವೃದ್ಧಿ ಪಾಲುದಾರಿಕೆ, ಮೂಲಸೌಕರ್ಯ ಬೆಂಬಲ, ಸಾಮರ್ಥ್ಯ ವರ್ಧನೆ, ಹವಾಮಾನ ಕ್ರಮ ಮತ್ತು ಆರೋಗ್ಯ ಕ್ಷೇತ್ರಗಳಲ್ಲಿ ಸಹಕಾರದ ಬಗ್ಗೆ ಇಬ್ಬರೂ ನಾಯಕರು ಚರ್ಚಿಸಿದರು. ರಕ್ಷಣೆ ಮತ್ತು ಕಡಲ ಭದ್ರತಾ ಸಹಕಾರವನ್ನು ಮತ್ತಷ್ಟು ಬಲಪಡಿಸಲು ಅವರು ಕರೆ ನೀಡಿದರು ಮತ್ತು ಈ ನಿಟ್ಟಿನಲ್ಲಿ, ಕೊಲಂಬೊ ಭದ್ರತಾ ಸಮಾವೇಶದ ಅಡಿಯಲ್ಲಿ ಎರಡೂ ದೇಶಗಳ ನಡುವಿನ ಸಹಯೋಗವನ್ನು ಗಮನಿಸಿದರು.

4. ಉಭಯ ನಾಯಕರು ಎರಡು ದೇಶಗಳ ನಡುವಿನ ಆರ್ಥಿಕ ಪಾಲುದಾರಿಕೆಯನ್ನು ಪರಿಶೀಲಿಸಿದರು. ಉದ್ದೇಶಿತ ಮುಕ್ತ ವ್ಯಾಪಾರ ಒಪ್ಪಂದ ಮತ್ತು ದ್ವಿಪಕ್ಷೀಯ ಹೂಡಿಕೆ ಒಪ್ಪಂದವು ಎರಡೂ ಕಡೆಯವರಿಗೆ ಹೊಸ ಅವಕಾಶಗಳನ್ನು ತೆರೆಯುತ್ತದೆ ಎಂದು ಪ್ರಧಾನಿ ಒತ್ತಿ ಹೇಳಿದರು. ವಿಶೇಷವಾಗಿ ಪ್ರವಾಸೋದ್ಯಮವನ್ನು ಉತ್ತೇಜಿಸಲು ಎರಡೂ ದೇಶಗಳು ಡಿಜಿಟಲ್ ಆರ್ಥಿಕತೆಯ ಪ್ರಯೋಜನವನ್ನು ಪಡೆಯಬೇಕು ಎಂದ ಅವರು, UPI ಅಳವಡಿಕೆ, ರೂಪೇ ಕಾರ್ಡ್ ಅಂಗೀಕಾರ ಮತ್ತು ಸ್ಥಳೀಯ ಕರೆನ್ಸಿಗಳಲ್ಲಿ ವ್ಯಾಪಾರದ ಬಗ್ಗೆ ಇತ್ತೀಚಿನ ತಿಳುವಳಿಕೆಗಳನ್ನು ಸ್ವಾಗತಿಸಿದರು. ದೇಶಗಳ ನಡುವಿನ ನಿಕಟ ಅಭಿವೃದ್ಧಿ ಪಾಲುದಾರಿಕೆಯು ಈಗಾಗಲೇ ಬಲವಾಗಿರುವ ಜನರ ನಡುವಿನ ಸಂಬಂಧಗಳಿಗೆ ಹೊಸ ಮೌಲ್ಯವನ್ನು ಸೇರಿಸುತ್ತಿದೆ ಎಂದು ಉಭಯ ನಾಯಕರು ಒತ್ತಿ ಹೇಳಿದರು.

5. ಜಾಗತಿಕ ದಕ್ಷಿಣದ ಪಾಲುದಾರರಾಗಿ, ಹವಾಮಾನ ಬದಲಾವಣೆ, ನವೀಕರಿಸಬಹುದಾದ ಇಂಧನದ ಪ್ರಚಾರ, ವಿಪತ್ತು ಅಪಾಯ ಕಡಿತ ಮತ್ತು ಹವಾಮಾನ ವಿಜ್ಞಾನದಂತಹ ವಿಷಯಗಳಲ್ಲಿ ಈ ಗ್ರಹ ಮತ್ತು ಅದರ ಜನರ ಹಿತಾಸಕ್ತಿಗಾಗಿ ಕೆಲಸ ಮಾಡುವುದನ್ನು ಮುಂದುವರಿಸುವುದಾಗಿ ಉಭಯ ನಾಯಕರು ಹೇಳಿದರು.

6. ಪಹಲ್ಗಾಮ್ ಭಯೋತ್ಪಾದಕ ದಾಳಿಯ ಬಲವಾದ ಖಂಡನೆ ಮತ್ತು ಭಯೋತ್ಪಾದನೆಯ ವಿರುದ್ಧದ ಭಾರತದ ಹೋರಾಟದಲ್ಲಿ ಒಗ್ಗಟ್ಟಿನ ಅಭಿವ್ಯಕ್ತಿಗಾಗಿ ಅಧ್ಯಕ್ಷ ಮುಯಿಝು ಅವರಿಗೆ ಪ್ರಧಾನಮಂತ್ರಿ ಧನ್ಯವಾದ ಅರ್ಪಿಸಿದರು.

7. ಇಬ್ಬರೂ ನಾಯಕರು ಮೀನುಗಾರಿಕೆ ಮತ್ತು ಜಲಚರ ಸಾಕಣೆ, ಹವಾಮಾನಶಾಸ್ತ್ರ, ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ, UPI, ಭಾರತೀಯ ಔಷಧಶಾಸ್ತ್ರ, ಮತ್ತು ರಿಯಾಯಿತಿ ಸುಲಭ ಸಾಲ ವ್ಯವಸ್ಥೆ ಕ್ಷೇತ್ರಗಳಲ್ಲಿ 6 ತಿಳಿವಳಿಕೆ ಒಪ್ಪಂದಗಳ ವಿನಿಮಯಕ್ಕೆ ಸಾಕ್ಷಿಯಾದರು. ಹೊಸ ಸುಲಭ ಸಾಲ ವ್ಯವಸ್ಥೆಯು ಮಾಲ್ಡೀವ್ಸ್‌ನಲ್ಲಿ ಮೂಲಸೌಕರ್ಯ ಅಭಿವೃದ್ಧಿ ಮತ್ತು ಇತರ ಚಟುವಟಿಕೆಗಳ ಬೆಂಬಲದಲ್ಲಿ ₹4850 ಕೋಟಿಗಳನ್ನು [ಅಂದಾಜು USD 550 ಮಿಲಿಯನ್] ಒದಗಿಸುತ್ತದೆ. ಅಸ್ತಿತ್ವದಲ್ಲಿರುವ LoC ಗಳಿಗೆ ತಿದ್ದುಪಡಿ ಒಪ್ಪಂದವನ್ನು ಕೂಡ ವಿನಿಮಯ ಮಾಡಿಕೊಳ್ಳಲಾಯಿತು. ಇದು ಮಾಲ್ಡೀವ್ಸ್‌ನ ವಾರ್ಷಿಕ ಸಾಲ ಮರುಪಾವತಿ ಜವಾಬ್ದಾರಿಗಳನ್ನು 40% ರಷ್ಟು ಕಡಿಮೆ ಮಾಡುತ್ತದೆ [USD 51 ಮಿಲಿಯನ್‌ನಿಂದ 29 ಮಿಲಿಯನ್‌ಗೆ]. ಎರಡೂ ಕಡೆಯವರು ಪ್ರಸ್ತಾವಿತ ಮುಕ್ತ ವ್ಯಾಪಾರ ಒಪ್ಪಂದ ಉಲ್ಲೇಖದ ನಿಯಮಗಳನ್ನು ವಿನಿಮಯ ಮಾಡಿಕೊಂಡರು.

8. ಉಭಯ ನಾಯಕರು ಅಡ್ಡು ನಗರದಲ್ಲಿ ರಸ್ತೆಗಳು ಮತ್ತು ಒಳಚರಂಡಿ ವ್ಯವಸ್ಥೆ ಯೋಜನೆಯನ್ನು ಮತ್ತು ಇತರ ನಗರಗಳಲ್ಲಿ 6 ಹೆಚ್ಚಿನ ಪರಿಣಾಮದ ಸಮುದಾಯ ಅಭಿವೃದ್ಧಿ ಯೋಜನೆಗಳನ್ನು ವರ್ಚುವಲ್ ಆಗಿ ಉದ್ಘಾಟಿಸಿದರು. ಮಾಲ್ಡೀವ್ಸ್ ರಾಷ್ಟ್ರೀಯ

ರಕ್ಷಣಾ ಪಡೆ ಮತ್ತು ವಲಸೆ ಪ್ರಾಧಿಕಾರಗಳಿಗೆ 3,300 ಸಾಮಾಜಿಕ ವಸತಿ ಘಟಕಗಳು ಮತ್ತು 72 ವಾಹನಗಳನ್ನು ಪ್ರಧಾನಮಂತ್ರಿ ಹಸ್ತಾಂತರಿಸಿದರು.

9. ಪ್ರಧಾನಮಂತ್ರಿ ಅವರು ಮಾಲ್ಡೀವ್ಸ್ ಸರ್ಕಾರಕ್ಕೆ ಆರೋಗ್ಯ ಮೈತ್ರಿ ಹೆಲ್ತ್ ಕ್ಯೂಬ್ [BHISHM] ಸೆಟ್‌ಗಳ ಎರಡು ಘಟಕಗಳನ್ನು ಕೂಡ ಹಸ್ತಾಂತರಿಸಿದರು. ಈ ಕ್ಯೂಬ್ ಅತ್ಯಾಧುನಿಕ ವೈದ್ಯಕೀಯ ಸಲಕರಣೆಗಳೊಂದಿಗೆ 200 ಗಾಯಾಳುಗಳಿಗೆ ನೆರವು ನೀಡಬಲ್ಲದು ಮತ್ತು ಆರು ವೈದ್ಯಕೀಯ ಸಿಬ್ಬಂದಿಯ ತಂಡವನ್ನು 72 ಗಂಟೆಗಳ ಕಾಲ ಉಳಿಸಿಕೊಳ್ಳಲು ಅಂತರ್ನಿರ್ಮಿತ ಬೆಂಬಲ ವ್ಯವಸ್ಥೆಗಳನ್ನು ಒಳಗೊಂಡಿದೆ.

10.  ಪ್ರಕೃತಿಯನ್ನು ಸಂರಕ್ಷಿಸುವ ಆಳವಾದ ಬದ್ಧತೆಯೊಂದಿಗೆ, ಇಬ್ಬರೂ ನಾಯಕರು ಭಾರತದ "ಏಕ್ ಪೇಡ್ ಮಾ ಕೆ ನಾಮ್" [ತಾಯಿಯ ಹೆಸರಲ್ಲಿ ಒಂದು ಸಸ್ಯ] ಮತ್ತು ಮಾಲ್ಡೀವ್ಸ್‌ನ "5 ಮಿಲಿಯನ್ ಮರ ನೆಡುವ ಪ್ರತಿಜ್ಞೆ" ಅಭಿಯಾನಗಳ ಭಾಗವಾಗಿ ಮಾವಿನ ಸಸಿಗಳನ್ನು ನೆಟ್ಟರು.

11. ಮಾಲ್ಡೀವ್ಸ್ ಮತ್ತು ಅದರ ಜನರನ್ನು ಅವರ ಅವಶ್ಯಕತೆಗಳು ಮತ್ತು ಆದ್ಯತೆಗಳಿಗೆ ಅನುಗುಣವಾಗಿ ಬೆಂಬಲಿಸುವ ಮತ್ತು ಹಿಂದೂ ಮಹಾಸಾಗರ ಪ್ರದೇಶದ ಶಾಂತಿ, ಪ್ರಗತಿ ಮತ್ತು ಸಮೃದ್ಧಿಗಾಗಿ ಬೆಂಬಲ ನೀಡುವ ಭಾರತದ ಬದ್ಧತೆಯನ್ನು ಪ್ರಧಾನಿ ಪುನರುಚ್ಚರಿಸಿದರು.

ಮಾಲೆ

ಜುಲೈ 25, 2025